# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ಹೆಚ್. ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಕರ್ನಾಟಕ ಲೋಕಾಯುಕ್ತಕ್ಕೆ ವಹಿಸುವ ಬಗ್ಗೆ.

**ಓದಲಾಗಿದೆ:**

ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ. ಪತ್ರ ಸಂಖ್ಯೆ:ಕಂಪ್ಲೆಂಟ್/ ಉಪಲೋಕ್/ ಜಿಎಲ್‌ಬಿ-56/2011/ಎಆರ್‌ಇ-6, ದಿನಾಂಕ: 22-5-2012.

- - -

**ಪ್ರಸ್ತಾವನೆ:**

2010-11ನೇ ಸಾಲಿನ ಆರ್.ಡಿ.ಎಫ್.ಡಿ. ಯೋಜನೆಯಡಿಯಲ್ಲಿ(ಎರಡು ರಸ್ತೆ ಕಾಮಗಾರಿಗಳು ನಬಾರ್ಡ್-XV ಮತ್ತು XVI) ಗುಲ್ಬರ್ಗಾ ತಾಲ್ಲೂಕಿನ ಕಮಲಾಪುರ ಗ್ರಾಮದ ಸುತ್ತ-ಮುತ್ತಲಿನ ರಸ್ತೆ ಮತ್ತು ಮರಗುತ್ತಿ ಗ್ರಾಮದ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಶ್ರೀ ಎಂ.ಹೆಚ್. ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ, ಇವರು ಟೆಂಡರ್ ಪ್ರಕಿಯೆಯನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿಪಿ 31 ಆರ್‌ಆರ್‌ಸಿ 2003, ದಿನಾಂಕ: 15-2-2003ರಲ್ಲಿ ನಿಗದಿಪಡಿಸಿರುವ 22 ದಿನಗಳ ಬದಲಿಗೆ 19 ಮತ್ತು 15 ದಿನಗಳ ಕಾಲಾವಧಿಯನ್ನು ನಿಗದಿಪಡಿಸುವ ಮೂಲಕ ಕರ್ನಾಟಕ ಪಾರದರ್ಶಕತೆ ನಿಯಮವನ್ನು ಉಲ್ಲಂಘಿಸಿರುತ್ತಾರೆಂಬ ಆರೋಪವು ಲೋಕಾಯುಕ್ತ ತನಿಖೆಯಲ್ಲಿ ಸಾಬೀತಾಗಿರುತ್ತದೆ. ಆದ್ದರಿಂದ, ಈ ಅಧಿಕಾರಿಯ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು, 1957ರ ನಿಯಮ-14(ಎ)ರ ಪ್ರಕಾರ ಇಲಾಖಾ ವಿಚಾರಣೆಯನ್ನು ಉಪಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುವರೆಂದು ಮೇಲೆ ಓದಲಾದ ದಿನಾಂಕ: 22-5-2012ರ ಪತ್ರದಲ್ಲಿ ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಇವರು ತಿಳಿಸಿರುತ್ತಾರೆ.

ಕರ್ನಾಟಕ ಉಪಲೋಕಾಯುಕ್ತ-1ರವರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಎಂ.ಹೆಚ್. ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಇವರ ವಿರುದ್ಧ ಮಾಡಿರುವ ಆರೋಪದಲ್ಲಿ ಸತ್ಯಾಂಶವಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದ್ದರಿಂದ, ಈ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಉಪಲೋಕಾಯುಕ್ತ-1 ರವರಿಗೆ ವಹಿಸಲು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

*ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 25 ಇಎನ್‌ಕ್ಯೂ 2012, ಬೆಂಗಳೂರು,*
*ದಿನಾಂಕ: 07-07-2012.*

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ

14-ಎ ರ ಪ್ರಕಾರ ಶ್ರೀ ಎಂ.ಹೆಚ್. ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ, ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

3/7/12
(ಎನ್.ವೈ. ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1) ಮಹಾಲೇಖಪಾಲರು(ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4) ಮಾನ್ಯ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮಾನ್ಯ ಉಪ ಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
6) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ.
7) ಅಪರ ನಿಬಂಧಕರು, ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8) ಮಾನ್ಯ ಗ್ರಾ.ಅ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9) ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ(ಸೇವೆಗಳು- ಎ ಮತ್ತು ಸಿ).
10) ಶ್ರೀ ಎಸ್.ಹೆಚ್. ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ.
11) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್) /ಉಪ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆ.
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.